ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಆರ್ಥಿಕ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE 6/2/2020

# ಖಾಸಗಿ ಭೂಖರೀದಿ ನಿಯಮ ಸರಳ

**ಬೆಂಗಳೂರು:** ಖಾಸಗಿ ಜಮೀನನ್ನು ಖರೀದಿಸುವ ನಿಯಮಗಳನ್ನು ಸರಳೀಕರಣಗೊಳಿಸಲಾಗಿದೆ ಎಂದು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯ್ ಭಾಸ್ಕರ್ ಹೇಳಿದರು.

ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತ (ಕೆಯುಐಡಿಎಫ್‌ಸಿ) ಮತ್ತು ದಿ ಬ್ಯಾಂಕಿಂಗ್ ಫೈನಾನ್ಸ್ ಸಹಯೋಗದಲ್ಲಿ ಬುಧವಾರ ಖಾಸಗಿ ಹೋಟೆಲ್‌ನಲ್ಲಿ ಏರ್ಪಡಿಸಿದ್ದ 'ಕರ್ನಾಟಕ ಸ್ಮಾರ್ಟ್ ಸಿಟೀಸ್ ಇನ್ವೆಸ್ಟ್‌ಮೆಂಟ್ ಸಮ್ಮಿಟ್' ಉದ್ಘಾಟಿಸಿ ಮಾತನಾಡಿದರು. ಖಾಸಗಿ ಉದ್ಯಮಿಗಳು ಉದ್ದಿಮೆಗಳನ್ನು ಆರಂಭಿಸಲು ಜಮೀನಿನ ಅವಶ್ಯಕತೆ ಇದ್ದು ಜಮೀನು ಖರೀದಿಸಲು ನಿಯಮಗಳು ಅಡ್ಡಿಯಾಗುತ್ತಿದ್ದವು. ಪ್ರಸ್ತುತ ನಿಯಮಗಳನ್ನು ಸರಳೀಕೃತಗೊಳಿಸಲಾಗಿದೆ ಎಂದು ಹೇಳಿದರು.



■ 'ಕರ್ನಾಟಕ ಸ್ಮಾರ್ಟ್ ಸಿಟೀಸ್ ಇನ್ವೆಸ್ಟ್‌ಮೆಂಟ್ ಸಮ್ಮಿಟ್‌ನಲ್ಲಿ ಕಾರ್ಯದರ್ಶಿ ವಿಜಯ ಭಾಸ್ಕರ್

ಬಂಡವಾಳ ಹೂಡಿಕೆ ಸಂಬಂಧ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಿ 40 ಉದ್ಯಮಿಗಳಿಗೆ ರಾಜ್ಯದಲ್ಲಿ ಹೂಡಿಕೆ ಮಾಡುವಂತೆ ಆಹ್ವಾನಿಸಿದ್ದಾರೆ ಎಂದು ಹೇಳಿದರು.

ಬೆಂಗಳೂರು ವಿಜ್ಞಾನ ಮತ್ತು ತಂತ್ರಜ್ಞಾನ, ಸ್ಟಾರ್ಟ್‌ಅಪ್ ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿದ್ದು ಮೆಟ್ರೋದಿಂದಾಗಿ ನಗರದಲ್ಲಿ ವಾಹನ ದಟ್ಟಣೆ ಕಡಿಮೆಯಾಗಿದೆ. ಸಬ್ ಅರ್ಬನ್ ರೈಲು ಯೋಜನೆಗೆ ಕೇಂದ್ರ ಬಜೆಟ್‌ನಲ್ಲಿ ಹಣ ಮೀಸಲಿಡಲಾಗಿದ್ದು ಈ ಯೋಜನೆ ಮುಕ್ತಾಯವಾದರೆ ಬಹಳಷ್ಟು ಅನುಕೂಲವಾಗಲಿದೆ. ಬೆಂಗಳೂರಿನಿಂದ ಹುಬ್ಬಳ್ಳಿ, ಬೆಳಗಾವಿ, ಮಂಗಳೂರು, ಕಲಬುರಗಿಗೆ ತೆರಳಲು ವಿಮಾನ ಸೌಲಭ್ಯವಿದ್ದು ಬೇರೆ ಜಿಲ್ಲೆಗಳಿಗೂ ಶೀಘ್ರ ವಿಸ್ತರಿಸಲಾಗುವುದು. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಾರ್ಚ್ ತಿಂಗಳಾಂತ್ಯದಲ್ಲಿ 2ನೇ ರನ್‌ವೇ ಕಾರ್ಯಾರಂಭಗೊಳ್ಳಲಿದೆ ಎಂದರು.

ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅಜುಮ್ ಪರ್ವೇಜ್ ಮಾತನಾಡಿದರು. ಇದೇ ವೇಳೆ ಇ-ಗೌರ್ನಮೆಂಟ್ ನಿಯತಕಾಲಿಕೆಯನ್ನು ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯ್ ಭಾಸ್ಕರ್ ಬಿಡುಗಡೆಗೊಳಿಸಿದರು.

ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತ ವ್ಯವಸ್ಥಾಪಕ ನಿರ್ದೇಶಕಿ ಚಾರುಲತಾ, ಎಲೆಟ್ ಟೆಕ್ನೋಮೀಡಿಯಾ ಸಿಇಒ ಡಾ.ರವಿಗುಪ್ತ ಸೇರಿದಂತೆ ಹಲವರು ಉಪಸ್ಥಿತರಿದ್ದರು.